ವಿಜಯವಾಣಿ ನಂ.1 ಕನ್ನಡ ದಿನಪತ್ರಿಕೆ



ಹುಬ್ಬಳ್ಳಿ ತಾಲೂಕಿನ ಅದರಗುಂಚಿ ಸ. ಹಿ. ಪ್ರಾ. ಮಾದರಿ ಕೇಂದ್ರ ಶಾಲೆಯ ಮತಗಟ್ಟೆಯಲ್ಲಿ ಮಾಜಿ ಶಾಸಕ, ಕುಂದಗೋಳ ಕ್ಷೇತ್ರದ ಪಕ್ಷೇತರ ಅಭ್ಯರ್ಥಿ ಎಸ್. ಐ. ಚಿಕ್ಕನಗೌಡ್ರ, ಅವರ ಪತ್ನಿ ಶಂಕರವ್ವ ಹಾಗೂ ಪುತ್ರಿ ನಂದಾ ಮತ ಚಲಾಯಿಸಿದರು.



ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಕುಟುಂಬ ಸಮೇತರಾಗಿ ಹುಬ್ಬಳ್ಳಿ ಲ್ಯಾಮಿಂಗ್ಟನ್ ಶಾಲೆಯ ಮತಗಟ್ಟೆಯಲ್ಲಿ ಮತ ಚಲಾಯಿಸಿದರು.

Hubli Edition
May 11, 2023 Page No. 4
Powered by : eReleGo.com

ವಿಜಯವಾಣಿ ನಂ.1 ಕನ್ನಡ ದಿನಪತ್ರಿಕೆ

# ಮರ್ಯಾದೆ ಇರುವವರು ಇಲ್ಲಿರಬಾರದು

**ಹುಬ್ಬಳ್ಳಿ:** ಇಂದಿನ ರಾಜಕೀಯ ವಾತಾವರಣ ಗಮನಿಸಿದರೆ ಮರ್ಯಾದೆ ಇರುವವರು ರಾಜಕಾರಣದಲ್ಲಿ ಇರಬಾರದು ಎನಿಸುತ್ತದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು. ನಗರದ ಲ್ಯಾಮಿಂಗ್ಟನ್ ಶಾಲೆಯಲ್ಲಿ ಬುಧವಾರ ಕುಟುಂಬ ಸಮೇತರಾಗಿ ಮತದಾನ ಮಾಡಿದ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಹೊರಟ್ಟಿ, ಮತದಾರರಿಗೆ ಆಮಿಷ ಒಡ್ಡಲಾಗುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿವೆ. ಕೆಲವು ಮತದಾರರು ಆಮಿಷಕ್ಕೆ ಒಳಗಾಗುತ್ತಿದ್ದಾರೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಹೀಗಾಗಬಾರದು ಎಂದರು. ಚುನಾವಣೆ ಪ್ರಚಾರ ಸಮಾವೇಶಗಳಲ್ಲಿ ಅಭಿವೃದ್ಧಿ ಆಧಾರಿತ ಚರ್ಚೆಗಳು ಆಗಲಿಲ್ಲ. ಆರೋಪ, ಪ್ರತ್ಯಾರೋಪಗಳಿಗೆ ಪ್ರಚಾರ ಸೀಮಿತವಾಗಿತ್ತು ಎಂದು ಕಳವಳ ವ್ಯಕ್ತಪಡಿಸಿದರು. ರಾಜಕಾರಣದಲ್ಲಿ ಈ ವ್ಯವಸ್ಥೆ ಬದಲಾಗಬೇಕು. ಚುನಾವಣೆಗಳು ಪ್ರಾಮಾಣಿಕವಾಗಿ ನಡೆಯಬೇಕು. ಮತದಾರರು ಸಹ ಯಾವುದೇ ರೀತಿಯ ಆಮಿಷಕ್ಕೆ ಒಳಗಾಗದೇ ಸೂಕ್ತ ಅಭ್ಯರ್ಥಿಗಳನ್ನು ಆಯ್ಕೆ ಮಾಡಬೇಕು ಎಂದು ಹೇಳಿದರು.

» ಬಸವರಾಜ ಹೊರಟ್ಟಿ ಹೇಳಿಕೆ